ಕಡೂರು ಡಿಸ್ಟ್ರಿಕ್ಟ್.

ಸ್ಥಿರಸ್ವತ್ತಿನ ಹರಾಜು ಒಗ್ಗೆ ಕೊಡಲ್ಪಟ್ಟ ಇಸ್ತಿಹಾರ್ ವ ಪ್ರಸಿದ್ಧಪತ್ರಿಕೆ.

ತಾರೀಖು 21ನೇ ಮಾರ್ಚಿ 1903.

1. ಕಂದಾಯದ ಬಾಕೀದಾರರಾದ ಮಂಗಳೂರು ಗ್ರಾಮದ ಮೆ॥ ಜಿ. ಜೆ. ರೆಬೆಲೊ ಪ್ರಭು ಯವರಿಂದ ಬರಬೇಕಾದ ಜಮೀರ್ ಕಂದಾಯದ ಬಾಕೀಗಾಗಿ ಇವರಿಂದ ನಮೂದಾಗುವ ಹಿಡುವಳಿದಾರ್ರ ಹಕ್ಕು ಬಾಧ್ಯತೆ ಕಳಕೊಂಡಿದ್ದಾಗಿ ಕಂಡೋಕ್ತವಾಗಿ ನಮೂದಾದ ಸ್ಥಿರಸ್ವತ್ತು ಕಡೂರು ಡಿಸ್ಟ್ರಿಕ್ಟ್ ಮೂಡಿಗೆರೆ ತಾಲ್ಲೂಕು ಮೂಡಿಗೆರೆ ಕಸಬಾ ಗ್ರಾಮದಲ್ಲಿ 1903ನೇ ಇಸವಿ ಮೇ 7ನೇ ತಾರೀಖಿನಲ್ಲಿ ಬಹಿರಂಗವಾದ ಹರಾಜು ಮಾಡಲ್ಪಡುತ್ತೆಂದು ಇದರಿಂದ ಪ್ರಸಿದ್ಧಪಡಿಸಲ್ಪಟ್ಟು ಇದೆ.

ಅಮಲ್ದಾರ್ರು ಯಾ ಶಿರಸ್ತೆದಾರ್ರವರಿಂದ ಹರಾಜು ಬೆ॥ 11 ಘಂಟೆಗೆ ಉಪಕ್ರಮಿಸಲ್ಪಡುತ್ತೆ. ಸ್ವತ್ತು ವಿಕ್ರಯಂ ಚಡ ದರ ಖಾಸ್ತುದಾರನ ಹೆಸರಿಗೆ ನಿಲ್ಲಿಸಲ್ಪಡುತ್ತೆ.

2. ಸದರೀ ಸ್ವತ್ತಿಗಾಗಿ ಹರಾಜುದಾರನು 1901—1902ನೇ ಸಾಲಿಗೆ ಪೂರ್ತಿಯಾಗಿ * ಪಾವತಿ ಮಾಡಬೇಕಾದ ಕಂದಾಯದ ಮೊಬಲಗು ಇದರಿಂದ ಕಾಣಿಸಿರುವ ತಪ್ಪಿಲ್ಲಿ ನಮೂದಿಸಿರುವ ತಪ್ಪೀಲ್ ಮೇರಿಗೆ 404—14—1 ರೂಪಾಯಿ ಆಗಿರುತ್ತೆ.

3. ಹರಾಜು ಕಾಲದಲ್ಲಿ ಹರಾಜುದಾರನು ಹರಾಜಿ ಮೊಬಲಗಿನ ಕೇಕಡಾ 25 ರೂಪಾಯಿಯನ್ನು ಡಿಪಾಜಿಟ್ಟು ಹಾಜರ್ಮಾಡಬೇಕಾಗಿರುತ್ತೆ. ಅದು ಜಾತಾ ಹರಾಜು ಖಾತೆ ಬಾಕೀ ಮೊಬಲಗು ಹರಾಜ್ ತಾರೀಖು ಲಾಗಾಯಿತು 15 ದಿವಸಗಳಲ್ಲಿ ಪಾವತೀ ಮಾಡಲ್ಪಡದೇ ಹೋದಲ್ಲಿ ಮೇಲೆ ಹೇಳಿದ ಡಿಪಾಜಿಟ್ಟು ಮೊಬಲಗನ್ನ ಹಾಜರ್ಮಾಡಿದವನು ಕಳದುಕೊಳ್ಳಿಲು ಗುರಿಯಾಗುತ್ತಾನೆ.

4. ಅಂಥಾ ಡಿಪಾಜಿಟ್ಟು ಮೊಬಲಗು ಹಾಜರ್ಮಾಡಲ್ಪಡದೆ ಯಾ ಹರಾಜು ಖಾತೆ ಬಾಕೀ ಮೊಬಲಗು ಪಾವತಿ ಮಾಡಲ್ಪಡದೆ ಹೋದಾಗ್ಯೆ ಸದರೀ ಸ್ವತ್ತು ಮೊದಲು ಹರಾಜುದಾರನ ಖರ್ಚಿನಿಂದಲೂ ಮತ್ತು ಅವನಿಗೆ ಅವರಿಂದ ಉಂಟಾಗಬಹುದಾದ ನಷ್ಟಕ್ಕೆ ಗುರಿಪಡಿಸಿಯೂ ಪುನಃ ಹರಾಜು ಮಾಡಲ್ಪಡುತ್ತೆ.

5. ಹರಾಜಿನಲ್ಲಿ ಸವಾಲ್ ಮಾಡತಕ್ಕ ಜನಗಳು ಖುದ್ದು ತಮ್ಮ ಸ್ವಂತಕ್ಕೋಸ್ಕರ ಸವಾಲ್ ಮಾಡುತ್ತಾರೆಯೇ ಯಾ ವಿಜಂಟು ಯಾ ಮುತಾಲೀಕರಾಗಿ ಸವಾಲ್ಮಾಡುತ್ತಾರೆಯೇ ಎಂಬ ಅಂಶವನ್ನ ತಿಳಿಸಬೇಕೆಂತಲೂ, ಇತರರಿಗೋಸ್ಕರ ಮುತಾಲೀಕರಾಗಿ ಸವಾಲ್ಮಾಡುವ ಸಂದರ್ಭದಲ್ಲಿ ಅಂಥಾ ತನ್ನ ವಿಜಯೂನರಿಂದ ಸಹಿ ಮಾಡಲ್ಪಟ್ಟ ಲಿಖಿತವಾದ ಅಧಿಕಾರ ಪತ್ರಿಕೆಯನ್ನು ಹಾಜರ್ಮಾಡುವಂತೆಯೂ ಕೇಳಲ್ಪಡಬಹುದು. ಅದನ್ನ ಅವರು ಹಾಜರ್ಮಾಡದೆ ಹೋದಲ್ಲಿ ಅವರ ಸವಾಲುಗಳು ತಿರಸ್ಕರಿಸಲ್ಪಡಬಹುದು.

6. ಹರಾಜಿನಲ್ಲಿ ಸ್ವತ್ತು ಯಾರ ಹೆಸರಿಗಾದರೂ ನಿಲ್ಲಿಸಲ್ಪಡುವದಕ್ಕೆ ಮುಂಚಿತವಾಗಿ, ಬಾಕೀದಾರನಾಗಲೀ ಆತನ ತರಫಿನವನಾಗಿ ಪ್ರವರ್ತಿಸುವ ಯಾ ಸದರೀ ಸ್ವತ್ತಿನಲ್ಲಿ ಬಾಧ್ಯತೆ ಇರುತ್ತೆಂದು ಹೇಳುವ ಯಾವ ಇತರ ಮನುಷ್ಯನೇ ಆಗಲೀ ಬಾಕಿಯಲ್ಲಿ ಬಂದಿರುವ ಪೂರಾ ಕಂದಾಯದ ಹಣವನ್ನೂ, ಬಡ್ಡಿ ಮತ್ತು ಇತರ ಖರ್ಚುಗಳ ಸಮೇತ ಹಾಜರ್ಮಾಡುವ ಪಕ್ಷಕ್ಕೆ ಹರಾಜು ನಿಲ್ಲಿಸಲ್ಪಡುತ್ತೆ.

7. ಹರಾಜು ಡೆಪ್ಯುಟಿ ಕಮಿಷನರವರಿಂದ ಮಂಜೂರ್ಮಾಡಲ್ಪಡುವ ತನಕ ಸ್ವತ್ತಿನ ಹರಾಜು ಪೂರ್ತಿಯಾಗುವದಿಲ್ಲ.

8. ಹರಾಜಿನಲ್ಲಿ ತಗದುಕೊಂಡವರು ಹರಾಜಿ ಮೊಬಲಗನ್ನ ಪೂರ್ತಿಯಾಗಿ ಪಾವತಿ ಮಾಡಿದ ಮೇಲೆ ಡೆಪ್ಯುಟಿ ಕಮಿಷನರವರಿಂದ ಹರಾಜು ಮಂಜೂರ್ಮಾಡಲ್ಪಟ್ಟ ಕೂಡ್ಲೆ, ಹರಾಜುದಾರ್ರು ಸದರೀ ಸ್ವತ್ತಿನ ಸ್ವಾಧೀನವನ್ನು ಹೊಂದುವರು. ಮತ್ತು ಸದರೀ ಸ್ವತ್ತು ಹರಾಜುದಾರನ ಹೆಸರಿನಲ್ಲಿ ರಿಜಿಸ್ಟರ್ ಮಾಡಲ್ಪಟ್ಟು ಡೆಪ್ಯುಟಿ ಕಮಿಷನರವರಿಂದ ಸೈ ಮೊಹರ್ ಮಾಡಲ್ಪಟ್ಟ ಬಾದು ಹರಾಜಿ ಸರಟಿಫಿಕೇಟು ಆತನಿಗೆ ಕೊಡಲ್ಪಡುವದು. ಸ್ವತ್ತಿನ ವಿವರಣೆಯಲ್ಲಿಯಾಗಲಿ ಯಾ ವಿಸ್ತೀರ್ಣದಲ್ಲಿಯಾಗಲಿ ಇರುವ ಸಂಕ್ಷಿಪ್ತತ್ವಗಳಿಗೆ ಗವರ್ನಮೆಂಟಿನವರು ಜವಾಬ್ದಾರ್ರಲ್ಲವೆಂಬ ಅಂಶವನ್ನು ಸ್ಪಷ್ಟವಾಗಿ ತಿಳಿದಿರತಕ್ಕದ್ದು.

9. ಹರಾಜಿನಿಂದ ತಮಿಗೆ ನಷ್ಟ ಉಂಟಾಯಿತೆಂದು ಎಣಿಸುವ ಜನಗಳು ಹರಾಜು ತಾರೀಖು ಲಾಗಾಯಿತು 30 ದಿವಸಗಳಲ್ಲಿ ಡೆಪ್ಯುಟಿ ಕಮಿಷನರವರಿಗೆ ಅಪ್ಪೀಲ್ ಮಾಡಿಕೊಳ್ಳುವದಕ್ಕೂ ಮತ್ತು ಅವರ ಹುಕುಮಿನ ಮೇಲೆ ಕಾನೂನಿನಿಂದ ವಿಧಿಸಲ್ಪಟ್ಟ ವಾಯಿದೆಯಲ್ಲಿ ಗವರ್ನಮೆಂಟಿನವರಿಗೆ ಅಪ್ಪೀಲ್ ಮಾಡಿಕೊಳ್ಳುವದಕ್ಕೂ ಸ್ವತಂತ್ರರಾಗಿರುತ್ತಾರೆ. ಸ್ವತ್ತಿನ ವಿಕ್ರಯವು ಅಂಥಾ ಅಪ್ಪೀಲಿನಲ್ಲಿ ಆಗುವ ಫೈನಲ್ ಹುಕುಮಿಗೆ ಬದ್ಧನಾಗಿರತಕ್ಕದ್ದು :—

ತಾಲ್ಲೂಕು.	ಹೋಬಳಿ.	ಗ್ರಾಮ.	ಬಾಕೀದಾರರ ಹೆಸರು.	ಸ್ವತ್ತಿನ ತಪ್ಪೀಲ್ ಕಟ್ಟಡಗಳು. ಕಟ್ಟಡದ ಹೆಸರು.	ಅಂದಾಜು ಕಿಮ್ಮತ್ತು. ರೂ. ಆ. ಪೈ.	ಜಮೀನು. ನಂಬರು ಅಥವಾ ಹೆಸರು.	ಮುನ್ಸೈಫ್ ಜರೀ ಅಥವಾ ಬಾಗಾಯತು.	ವಿಸ್ತೀರ್ಣ. ಎ.	ಗು.	ಅಂದಾಜು ಕಿಮ್ಮತ್ತು. ರೂ.	ಆ.	ಪೈ.	ಸರ್ಕಾರಕ್ಕೆ ಬರಬೇಕಾದ ನೋಟಿಸ್ ಫೀ ವಗೈರೆ ಸಹಿತವಾದ ಬಾಕೀ ಮೊಬಲಗು. ರೂ.	ಆ.	ಪೈ.
ಮೂಡಿಗೆರೆ	ಕಳಸ	ಹನಸಣಿಕೆ	ಪಸಾರ ಕಾಫಿ ಪ್ಲಾ॥ ಪ್ರೊ. ರೆಬೆಲೊಪ್ರಭು.	1 ಮನೆ 1 ಆಫೀಸು 4 ಆಳು ಮನೆ	10	120 130 131 213 214 215	ತರ ಕಾಫಿ ಡಿಟೋ ಡಿಟೋ ಡಿಟೋ ಡಿಟೋ	.. 56 171 80 57 5	37 34 15 13 26 32	2 57 171 80 57 6	4 0 8 4 12 0	0 0 0 0 0 0	404	14	1

ಸರ್ವೆ ನಂಬರುವಾರಾಗಿ ಹರಾಜು ಮಾಡಿಸಲ್ಪಡುತ್ತೆ.

* ಯಾ ಬಾಕಿ ಇರುವ ಮಟ್ಟಿಗೆ ಸಂದರ್ಭಾನುಸಾರ ನಮೂದಿಸತಕ್ಕದ್ದು.

ಎಂ. ನಾರಾಯಣರಾವ್, ಡೆಪ್ಯುಟಿ ಕಮಿಷನರ್.